	ತುಮಕೂರು	ಆಕ್ಷೇಪಣೆಗಳಿಗೆ ಉತ್ತರಿಸಲಾಗಿದೆ
12	ದಾವಣಗೆರೆ ವಿಶ್ವವಿದ್ಯಾಲಯ, ದಾವಣಗೆರೆ	ಆಕ್ಷೇಪಣೆಗಳಿಗೆ ಉತ್ತರ ಸಲ್ಲಿಸಲಾಗಿದೆ
13	ಡಾ: ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ, ಮೈಸೂರು.	ಆಕ್ಷೇಪಣೆಗಳು ಬಾಕಿ ಇರುವುದಿಲ್ಲ.
14	ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ	ಆಕ್ಷೇಪಣೆಗಳು ಬಾಕಿ ಇರುವುದಿಲ್ಲ.
15	ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ, ಬಳ್ಳಾರಿ	ಲೆಕ್ಕಪರಿಶೋಧನೆ ಇನ್ನೂ ನಡೆದಿರುವುದಿಲ್ಲ
16	ಕರ್ನಾಟಕ ರಾಜ್ಯ ಸಂಸ್ಕೃತ ವಿಶ್ವವಿದ್ಯಾಲಯ, ಚಾಮರಾಜಪೇಟೆ, ಬೆಂಗಳೂರು	ಆಕ್ಷೇಪಣೆಗಳು ಬಾಕಿ ಇರುವುದಿಲ್ಲ
17	ಕರ್ನಾಟಕ ರಾಜ್ಯ ಜಾನಪದ ವಿಶ್ವವಿದ್ಯಾಲಯ, ಶಿಗ್ಗಾವಿ ತಾಲ್ಲೂಕು ಹಾವೇರಿ ಜಿಲ್ಲೆ.	ಆಕ್ಷೇಪಣೆಗಳು ಬಾಕಿ ಇರುವುದಿಲ್ಲ

ಮಧುಮೇಹಿಗಳ ಔಷಧಿ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 27 (18)

ಶ್ರೀ ರವಿಸುಬ್ರಹ್ಮಣ್ಯ ಎಲ್.ಎ. (ಬಸವನಗುಡಿ)

ಅ) ರಾಜ್ಯದಲ್ಲಿ ಮಧುಮೇಹದಿಂದ ಬಳಲುತ್ತಿರುವವರ ಸಂಖ್ಯೆ ಎಷ್ಟು; ಮಧುಮೇಹಿಗಳನ್ನು ಗುರುತಿಸಲು ಸರ್ಕಾರ ಸಮೀಕ್ಷಾ ಕಾರ್ಯವನ್ನು ನಡೆಸಿದೆಯೇ, ಹಾಗಿದ್ದಲ್ಲಿ, ಯಾವ ಸಾಲಿನಲ್ಲಿ ಸಮೀಕ್ಷೆ ನಡೆಸಲಾಗಿದೆ (ವಿವರ ನೀಡುವುದು);

ಆ) ಮಧುಮೇಹಿಗಳಿಗಾಗಿ ಉತ್ಪಾದನೆಯಾಗುವ ಔಷಧಿಗಳ ಬೆಲೆ ದುಬಾರಿಯಾಗಿದ್ದು, ಬೆಲೆ ಕಡಿಮೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು;

ಇ) ಸರ್ಕಾರಿ ಸ್ವಾಮ್ಯದ ಸಂಸ್ಥೆಯಾದ ಕರ್ನಾಟಕ ಆಂಟಿಬಯೋಟಿಕ್ ಸಂಸ್ಥೆಯಲ್ಲಿಯೇ ಮಧುಮೇಹಕ್ಕೆ ಸಂಬಂಧಿಸಿದ ಔಷಧಿಗಳನ್ನು ಕಡಿಮೆ ಖರ್ಚಿನಲ್ಲಿ ತಯಾರಿಸಿ ಪೂರೈಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಈ) ಮಧುಮೇಹಕ್ಕೆ ಸಂಬಂಧಪಟ್ಟ ಔಷಧಿಗಳ ತೆರಿಗೆ ವಿನಾಯಿತಿಗಾಗಿ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವ ಕುರಿತು ರಾಜ್ಯ ಸರ್ಕಾರವು ನಿರ್ಧಾರ ಕೈಗೊಳ್ಳುವುದೇ;

ಉ) General ಹಾಗೂ Generic ಔಷಧಿಗಳ ಬಳಕೆ ಹೆಚ್ಚಾಗುತ್ತಿದ್ದು ಇವುಗಳ ಗುಣಮಟ್ಟ ಹಾಗೂ ಬೆಲೆ ನಿಯಂತ್ರಣಕ್ಕಾಗಿ ರಾಜ್ಯ ಸರ್ಕಾರ ಯಾವ ಕ್ರಮ ಕೈಗೊಂಡಿದೆ?

ಶ್ರೀ ಎಸ್.ಎ. ರಾಮದಾಸ್ (ವೈದ್ಯಕೀಯ ಶಿಕ್ಷಣ ಸಚಿವರು)

ಅ) ರಾಜ್ಯದಲ್ಲಿ ಮಧುಮೇಹದಿಂದ ಬಳಲುತ್ತಿರುವ ಬಗ್ಗೆ ಯಾವುದೇ ವೈಜ್ಞಾನಿಕ ಸಮೀಕ್ಷೆ ನಡೆದಿರುವುದಿಲ್ಲ.

ಸರ್ಕಾರಿ ಸ್ವಾಯತ್ತ ಸಂಸ್ಥೆಯಾದ ಕರ್ನಾಟಕ ಮಧುಮೇಹ ಸಂಸ್ಥೆಯ ವತಿಯಿಂದ ಕನಕಪುರ ತಾಲ್ಲೂಕಿನ ಸಾತನೂರು ಗ್ರಾಮದಲ್ಲಿ ಹಾಗೂ ಕೋಲಾರ ಜಿಲ್ಲೆಯ ಮಾಲೂರಿನಲ್ಲಿ 2008–09ನೇ ಸಾಲಿನಲ್ಲಿ ನಡೆಸಲಾದ ಸಂಶೋಧನೆಯಿಂದ ಸಾತನೂರಿನಲ್ಲಿ ಶೇ. 11.9 ರಷ್ಟು ಹಾಗೂ ಮಾಲೂರು ಪಟ್ಟಣದಲ್ಲಿ ಶೇ. 32 ರಷ್ಟು ಮಧುಮೇಹಿಗಳಿರುವುದು ಕಂಡು ಬಂದಿದೆ.

ಆ) ವೈದ್ಯಕೀಯ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಆಸ್ಪತ್ರೆಗಳಲ್ಲಿ ರೋಗಿಗಳಿಗೆ ಕಡಿಮೆ ದರದಲ್ಲಿ ಔಷಧಿಗಳನ್ನು ಒದಗಿಸುವ ಸಲುವಾಗಿ ಜನರಿಕ್ ಡ್ರಗ್ ಮಳಿಗೆಗಳನ್ನು ತೆರೆಯಲು ಕ್ರಮ ಕೈಗೊಳ್ಳಲಾಗಿದೆ.

ಇ) ಕರ್ನಾಟಕ ಆಂಟಿಬಯೋಟಿಕ್ ಸಂಸ್ಥೆಯು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆಡಳಿತ ವ್ಯಾಪ್ತಿಯಲ್ಲಿದ್ದು ಈ ವಿಷಯವನ್ನು ಅವರ ಗಮನಕ್ಕೆ ತರಲಾಗುವುದು.

ಈ) ಈ ವಿಷಯದ ಬಗ್ಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯೊಂದಿಗೆ ಸಮಾಲೋಚಿಸಲಾಗುವುದು.

ಉ) ಔಷಧ ನಿಯಂತ್ರಣ ಇಲಾಖೆಯ ಅಮಲುಜಾರಿ ಅಧಿಕಾರಿಗಳು ಮಾರುಕಟ್ಟೆಯಲ್ಲಿ ಹಾಗೂ ಆಸ್ಪತ್ರೆಗಳಲ್ಲಿ ಲಭ್ಯವಿರುವ ಔಷಧಗಳ ಗುಣಮಟ್ಟವನ್ನು ತಿಳಿದುಕೊಳ್ಳಲು ಔಷಧಗಳ ಮಾದರಿಗಳನ್ನು ಪಡೆದು ರಾಜ್ಯದಲ್ಲಿರುವ ಮೂರು ಔಷಧ ಪ್ರಯೋಗಾಲಯಗಳಲ್ಲಿ ವಿಶ್ಲೇಷಣೆಗೆ ಕಳುಹಿಸುತ್ತಿರುತ್ತಾರೆ. ಉತ್ತಮ ಗುಣಮಟ್ಟ ಹೊಂದದೆ ಇರುವಂತಹ ಔಷಧಗಳ ದಾಸ್ತಾನನ್ನು ಜಪ್ತಿಮಾಡಿಕೊಂಡು ಔಷಧ ಮತ್ತು ಕಾಂತಿವರ್ಧಕ ಅಧಿನಿಯಮ 1940 ಮತ್ತು ಅದರಡಿಯ ನಿಯಮಾವಳಿಯಂತೆ ಮೊಕದ್ದಮೆ ಹೂಡುವುದು ಒಳಗೊಂಡಂತೆ ಸೂಕ್ತ ಕ್ರಮವನ್ನು ಜರುಗಿಸಲಾಗುತ್ತಿದೆ.

ಇದಲ್ಲದೆ, 2012 ನೇ ಸಾಲಿನಲ್ಲಿ ಔಷಧ ನಿಯಂತ್ರಣ ಇಲಾಖೆಯ ಅಮಲುಜಾರಿ ಅಧಿಕಾರಿಗಳು NGO ಸಂಸ್ಥೆಗಳ ಪ್ರತಿನಿಧಿಗಳ ಸಹಕಾರದೊಂದಿಗೆ, ಸರ್ಕಾರ ಔಷಧ ಮಳಿಗೆ, ಆಸ್ಪತ್ರೆ ಚಿಲ್ಲರೆ ಹಾಗೂ ಸಗಟು ಔಷಧ ವ್ಯಾಪಾರಸ್ಥಗಳಿಂದ NGO ಪ್ರತಿನಿಧಿಯ ಆರಿಸಿದಂತಹ ಔಷಧಗಳನ್ನು ನಮ್ಮ ಹಾಗೂ ನೆರೆ ರಾಜ್ಯಗಳಲ್ಲಿ ಇರುವ ಅನುಮೋದಿತ ಔಷಧ ಪರೀಕ್ಷಾ ಪ್ರಯೋಗಾಲಯಗಳಿಗೆ ಔಷಧ ಮಾದರಿಗಳನ್ನು ಕಳುಹಿಸಿ ವಿಶ್ಲೇಷಿಸಲ್ಪಟ್ಟಿರುತ್ತದೆ. ಇಂತಹ ಸಮೀಕ್ಷೆಯಿಂದ ರಾಜ್ಯದಲ್ಲಿ ಲಭ್ಯವಿರುವ ಔಷಧಗಳ ಗುಣಮಟ್ಟವನ್ನು ಪರೀಕ್ಷಿಸಲು ಸಾಧ್ಯವಾಗುತ್ತದೆ. ಹೀಗೆ ಪಡೆದ ಔಷಧ ಮಾದರಿಗಳಲ್ಲಿ Genera ಹಾಗೂ Generic ಔಷಧಗಳು ಸಹ ಒಳಗೊಂಡಿರುತ್ತವೆ.

ಭಾರತ ಸರ್ಕಾರದ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ National Pharmaceutical Pricing Authority (NPPA) ನವದೆಹಲಿ ಇವರು ನಿಗದಿಪಡಿಸಿರುವ ಬೆಲೆಯಂತೆ ಮಾರುಕಟ್ಟೆಯಲ್ಲಿ ಲಭ್ಯವಾಗುವ

ಔಷಧಗಳ ಬೆಲೆಯ ಬಗ್ಗೆ ಔಷಧ ನಿಯಂತ್ರಣ ಇಲಾಖೆಯ ಅಮಲುಜಾರಿ ಅಧಿಕಾರಿಗಳು ಚಿಲ್ಲರೆ ಹಾಗೂ ಸಗಟು ಔಷಧ ವ್ಯಾಪಾರ ಸಂಸ್ಥೆಗಳ ಪರಿವೀಕ್ಷಣೆಯ ಸಮಯದಲ್ಲಿ ಬೆಲೆಗಳ ಬಗ್ಗೆ ವಿಶೇಷವಾಗಿ ಪರಿಶೀಲಿಸಿ ನಿಗದಿತ ಬೆಲೆಯಲ್ಲಿ ಉಲ್ಲಂಘನೆಯಾಗಿ ಕಂಡುಬಂದಂತಹ ಔಷಧಗಳ ತಯಾರಿಕ ಸಂಸ್ಥೆಯ ಮೇಲೆ Drugs (Prices Control) Order 1995 ರ ಅಡಿಯಲ್ಲಿ ಮೊಕದ್ದಮೆ ಹೂಡುವುದನ್ನು ಒಳಗೊಂಡಂತೆ ಸೂಕ್ತ ಕ್ರಮವನ್ನು ಕೈಗೊಳ್ಳಲಾಗುತ್ತಿದೆ ಹಾಗೂ National Pharmaceutical Pricing Authority (NPPA) ರವರಿಗೂ ಸೂಕ್ತ ಕ್ರಮ ಕೈಗೊಳ್ಳಲು ತಿಳಿಸಲಾಗುತ್ತಿದೆ.

ಆರಾಧನಾ ಯೋಜನೆ ಯಡಿ ಬಿಡುಗಡೆಯಾದ ಹಣ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 14 (50)

ಶ್ರೀ ಖಾದರ್ ಯು.ಟಿ. (ಮಂಗಳೂರು)

ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಆರಾಧನಾ ಯೋಜನೆಯಡಿ ಬಿಡುಗಡೆ ಮಾಡಿ ಖರ್ಚು ಮಾಡಿದ ಅನುದಾನ ಎಷ್ಟು; (ಕ್ಷೇತ್ರವಾರು ವಿವರ ಒದಗಿಸುವುದು)

ಆ) ಮಂಗಳೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಆರಾಧನಾ ಯೋಜನೆ ಯಡಿಯಲ್ಲಿ ಕಡಿಮೆ ಅನುದಾನ ಬಿಡುಗಡೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಅನುದಾನವನ್ನು ಹೆಚ್ಚು ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು?